# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | **1226** |
| ಮಾನ್ಯ ಸದಸ್ಯರು ಹೆಸರು | : | ಶ್ರೀ ಪಿ. ಆರ್. ರಮೇಶ್ (ನಾಮನಿರ್ದೇಶನ ಹೊಂದಿದವರು). |
| ಉತ್ತರಿಸಬೇಕಾದ ದಿನಾಂಕ | : | 07/03/2022 |
| ಉತ್ತರಿಸುವ ಸಚಿವರು | : | ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು. |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿರುವ ಎಲ್ಲಾ ಸರ್ಕಾರಿ ಆಸ್ಪತ್ರೆಗಳಲ್ಲಿ/ ಚಿಕಿತ್ಸಾಲಯಗಳಲ್ಲಿ ಹೊರ/ಒಳ ರೋಗಿಗಳ ಚಿಕಿತ್ಸೆಗಾಗಿ ದಿನ ಮತ್ತು ರಾತ್ರಿ ಪಾಳಿ ಆಧಾರದ ಮೇಲೆ ವೈದ್ಯರ ನೇಮಕಾತಿ ಮಾಡಲಾಗಿದೆಯೇ; (ವಿವರವಾದ ಮಾಹಿತಿ ನೀಡುವುದು) ಬಾಕಿ ಇರುವ ಸರ್ಕಾರಿ ಆಸ್ಪತ್ರೆಗಳ/ಚಿಕಿತ್ಸಾಲಯಗಳ ಜಿಲ್ಲಾವಾರು ಮಾಹಿತಿ ನೀಡುವುದು). | ಹೌದು |
| ಆ) | ದಿನ ಮತ್ತು ರಾತ್ರಿ ಪಾಳಿ ಆಧಾರದ ಮೇಲೆ ನೇಮಕವಾದ ವೈದ್ಯರು ಆಸ್ಪತ್ರೆಗಳಲ್ಲಿ/ ಚಿಕಿತ್ಸಾಲಯಗಳಲ್ಲಿ ಅಲಭ್ಯತೆಯ ಬಗ್ಗೆ ಸಾರ್ವಜನಿಕರಿಂದ ದೂರುಗಳು ಬಂದಿವೆಯೇ; ಬಂದಿದ್ದಲ್ಲಿ, ಸರ್ಕಾರ ತೆಗೆದುಕೊಂಡ ಕ್ರಮಗಳೇನು? (ಜಿಲ್ಲಾವಾರು ವಿವರ ನೀಡುವುದು). | ಜಿಲ್ಲೆಯ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ/ಜಿಲ್ಲಾ ಶಸ್ತ್ರಚಿಕಿತ್ಸಕರು/ಆಡಳಿತ ವೈದ್ಯಾಧಿಕಾರಿಗಳು ಆಯಾ ಸರ್ಕಾರಿ ಆಸ್ಪತ್ರೆಗಳಲ್ಲಿ/ ಚಿಕಿತ್ಸಾಲಯಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ವೈದ್ಯರುಗಳಿಗೆ ದಿನ/ರಾತ್ರಿ ಪಾಳಿ ಆಧಾರದ ಮೇಲೆ ಹೊರ/ಒಳ ರೋಗಿಗಳಿಗೆ ಚಿಕಿತ್ಸೆ ನೀಡುತ್ತಿದ್ದು, ಸಾರ್ವಜನಿಕರಿಗೆ ತೊಂದರೆ ಆಗದ ರೀತಿಯಲ್ಲಿ ಕ್ರಮ ಕೈಗೊಳ್ಳಲಾಗಿದೆ.<br><br>ಸಾರ್ವಜನಿಕರಿಂದ ದೂರುಗಳು ಬಂದಲ್ಲಿ, ಆಯಾ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ/ ಜಿಲ್ಲಾ ಶಸ್ತ್ರಚಿಕಿತ್ಸಕರು ಆಯಾ ಸಾರ್ವಜನಿಕ ಆಸ್ಪತ್ರೆ/ಸಮುದಾಯ ಆರೋಗ್ಯ ಕೇಂದ್ರಗಳಿಗೆ ವೈದ್ಯರ ಪರ್ಯಾಯ ವ್ಯವಸ್ಥೆ ಮಾಡುವ ಮೂಲಕ ಸಾರ್ವಜನಿಕರಿಗೆ ತೊಂದರೆ ಆಗದ ರೀತಿಯಲ್ಲಿ ಕ್ರಮ ಕೈಗೊಳ್ಳುತ್ತಾರೆ. |

**ಆಕುಕ 25 ಹೆಚ್‌ಎಸ್‌ಡಿ 2022)**

**(ಡಾ|| ಕೆ. ಸುಧಾಕರ್)**
ಆರೋಗ್ಯ ಮತ್ತು ಕುಟುಂಬ ಕಲ್ಯಾಣ
ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು.